ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಭಾಷಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದಚುನಾಯಿತರಾದವರು):-

1497 (1727) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಭಾಷಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ವ್ಯಾಖ್ಯಾನವೇನು ; ಭಾಷಾ ಅಲ್ಪಸಂಖ್ಯಾತರ ಶಾಲೆಗಳಿಗೆ ಸರ್ಕಾರ ನೀಡುತ್ತಿರುವ ರಿಯಾಯಿತಿಗಳೇನು ; ಈ ಶಿಕ್ಷಣ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರದ ರೀತಿಯಲ್ಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂತಹ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಭಾಷಾ ಅಲ್ಪಸಂಖ್ಯಾತರ/ಧಾರ್ಮಿಕ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಲ್ಲಿ ಆಯಾಯ ಭಾಷೆಯ/ಧರ್ಮದ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಠ 50% ಇದ್ದರೆ ಮಾತ್ರ ಅಂತಹ ಶಿಕ್ಷಣ ಸಂಸ್ಥೆಗಳನ್ನು ಭಾಷಾ/ಧಾರ್ಮಿಕ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳು ಎಂದು ಪರಿಗಣಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಭಾಷಾ ಅಲ್ಪಸಂಖ್ಯಾತರ/ಧಾರ್ಮಿಕ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಲ್ಲಿ ಆರ್ಟಿಇ ಅಡಿಯಲ್ಲಿ ಬಡವರ ಮಕ್ಕಳಿಗೆ ಪ್ರವೇಶಾತಿ ನೀಡದಿದ್ದಲ್ಲಿ, ಅಂತಹ ಶಿಕ್ಷಣ ಸಂಸ್ಥೆಗಳ ಮಾನ್ಯತೆಯನ್ನು ರದ್ದು ಪಡಿಸುವಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಈ ಕುರಿತು ಸರ್ಕಾರದ ನಿಲುವೇನು ?